# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 55(69) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27.01.2026 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮೈಸೂರು ಮತ್ತು ಬೆಳಗಾವಿನಂತಹ ಪ್ರಮುಖ ಕೈಗಾರಿಕಾ ಪ್ರದೇಶಗಳಲ್ಲಿ ಕಳಪೆ ರಸ್ತೆಗಳು, ವಿದ್ಯುತ್ ಅಡಚಣೆಗಳು ಮತ್ತು ಇತರೇ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಮೈಸೂರು ಮತ್ತು ಬೆಳಗಾವಿ ಕೈಗಾರಿಕಾ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ, ಚರಂಡಿ, ನೀರು ಹಾಗೂ ವಿದ್ಯುತ್ ಸರಬರಾಜು ಅಭಿವೃದ್ಧಿ ಕಾಮಗಾರಿಗಳನ್ನು MoRTH Specification ನಂತೆ ಅಭಿವೃದ್ಧಿಪಡಿಸಲಾಗಿರುತ್ತದೆ. ಕಾಲ ಕ್ರಮೇಣ ಹಳೆಯ ಕೈಗಾರಿಕಾ ಪ್ರದೇಶಗಳಲ್ಲಿ ಭಾರಿ ವಾಹನಗಳ ಸಂಚಾರದಿಂದಾಗಿ ರಸ್ತೆಗಳು ಹಾಳಾಗುತ್ತಿದ್ದು, ಸದರಿ ರಸ್ತೆಗಳನ್ನು ಮಂಡಳಿ ವತಿಯಿಂದ ಆಗಿಂದಾಗೆ ನಿರ್ವಹಣೆ ಮಾಡಲಾಗುತ್ತಿರುತ್ತದೆ.<br><br>ಮುಂದುವರೆದು, ಬೆಳಗಾವಿ ಕೈಗಾರಿಕಾ ಪ್ರದೇಶಗಳಲ್ಲಿನ ಮೂಲಭೂತ ಸೌಕರ್ಯಗಳನ್ನು ಪುನರ್ ನಿರ್ಮಾಣ ಮಾಡಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ. ಅದರಲ್ಲಿ ಕಣಬರ್ಗಿ ಕೈಗಾರಿಕಾ ಪ್ರದೇಶದಲ್ಲಿ ಹಾಳಾಗಿರುವ ರಸ್ತೆ ಸುಧಾರಣೆ ಮತ್ತು ಒಳಚರಂಡಿ ನಿರ್ಮಾಣ ಮಾಡುವ ಸಲುವಾಗಿ 2 ಕಾಮಗಾರಿಗಳಿಗೆ ಒಟ್ಟು 7.37 ಕೋಟಿಗಳು ಹಾಗೂ ಕಣಗಲಾ ಕೈಗಾರಿಕಾ ಪ್ರದೇಶದ ರಸ್ತೆ ಸುಧಾರಣೆ 1 ಕಾಮಗಾರಿಗೆ 3.36 ಕೋಟಿಗಳಿಗೆ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ಮುಂದುವರೆದು ಬೆಳಗಾವಿ ಜಿಲ್ಲೆಯ ಕೈಗಾರಿಕಾ ಪ್ರದೇಶಗಳಲ್ಲಿನ ಬೀದಿ ದೀಪಗಳ ವಾರ್ಷಿಕ ನಿರ್ವಹಣೆಗೆ ಸಂಭಂದಿಸಿದಂತೆ ಗುತ್ತಿಗೆದಾರರನ್ನು ನೇಮಿಸಲಾಗಿದ್ದು ನಿರ್ವಹಣೆ ಕಾರ್ಯ ಪ್ರಗತಿಯಲ್ಲಿರುತ್ತದೆ.<br><br>ಮೈಸೂರು ಕೈಗಾರಿಕಾ ಪ್ರದೇಶಗಳನ್ನು 2024-25ನೇ ಸಾಲಿನಿಂದ ವಿಶೇಷ ಹೂಡಿಕೆ ಪ್ರದೇಶವೆಂದು (Special Investment Region) ಘೋಷಿಸಿರುವುದರಿಂದ ಮಂಡಳಿ ವತಿಯಿಂದ ಸಂಗ್ರಹಿಸಲಾಗುವ ತೆರಿಗೆ ಮೊತ್ತವನ್ನು ಆಯಾ ಕೈಗಾರಿಕಾ ಪ್ರದೇಶಗಳಿಗೆ ಅಭಿವೃದ್ಧಿ ಮತ್ತು ನಿರ್ವಹಣೆಗೆ ಬಳಸಬೇಕಾಗಿರುವುದರಿಂದ ಪ್ರಸ್ತುತ ಸಾಲಿನಿಂದ ಮೂಲಭೂತ ಸೌಕರ್ಯಗಳಾದ ರಸ್ತೆ, ಚರಂಡಿ, ನೀರು ಹಾಗೂ ವಿದ್ಯುತ್ ಕಾಮಗಾರಿಗಳನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮತ್ತು ನವೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಈ ಕೊರತೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; | |

| | | |
|---|---|---|
| ಇ) | ರಾಜ್ಯದ ಕೈಗಾರಿಕಾ ಪ್ರದೇಶಗಳಲ್ಲಿ ಇಲ್ಲಿಯವರೆಗೂ ಸಹ ನುರಿತ ಕೆಲಸಗಾರರ ಕೊರತೆ ಇದ್ದು, ಈ ಸಮಸ್ಯೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; (ತರಬೇತಿ ಮತ್ತು ಇತ್ಯಾದಿ) | ಕೈಗಾರಿಕಾ ಘಟಕಗಳು ತಮ್ಮ ಸಿಬ್ಬಂದಿಗಳಿಗೆ ಅಗತ್ಯವಿರುವ ಕೌಶಲ್ಯವನ್ನು ಸ್ವಂತವಾಗಿ ಪರಿಣಿತರ ಮೂಲಕ ಪಡೆದುಕೊಳ್ಳುತ್ತಾರೆ.<br><br>ಮುಂದುವರೆದು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ಇಲಾಖೆಯಿಂದ ಸಹ ತರಬೇತಿಗಳನ್ನು ಆಯೋಜಿಸಲಾಗುತ್ತಿದೆ. |
| ಈ) | ಕೈಗಾರಿಕೆಗಳು, ವಿಶೇಷವಾಗಿ, MSME ಗಳು, ಸಕಾಲಿಕ ಮತ್ತು ಸಾಕಷ್ಟು ಔಪಚಾರಿಕ (accessing timely and adequate) ಸಾಲವನ್ನು ಪಡೆಯುವಲ್ಲಿ ತೊಂದರೆಗಳನ್ನು ಎದುರಿಸುತ್ತಿರುವುದು ನಿಜವೇ; ಇದಕ್ಕೆ ಕಾರಣಗಳೇನು ಮತ್ತು ಈ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ನಿಭಾಯಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯು ರಾಜ್ಯದ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳಿಗೆ ದೀರ್ಘಾವಧಿ ಹಣಕಾಸಿನ ನೆರವನ್ನು ನೀಡುತ್ತಿದ್ದು, ಸಾಲ ಪಡೆಯುವಲ್ಲಿ ಗ್ರಾಹಕರಿಗೆ ತೊಂದರೆಯಾಗಿರುವುದಿಲ್ಲ.<br><br>ಅಲ್ಲದೇ, MSME ಗಳಿಗೆ Credit Guarantee Scheme ನಡಿ ಸಾಲ ಸೌಲಭ್ಯ ಪಡೆಯಲು ಅವಕಾಶವಿರುತ್ತದೆ.<br><br>ಮಾರುಕಟ್ಟೆ ಸಂಬಂಧ MDA ಮತ್ತು ತಂತ್ರಜ್ಞಾನ ಅಳವಡಿಕೆಗೆ Credit Linked Subsidy for Technology Upgradation Scheme ಗಳು ಲಭ್ಯವಿರುತ್ತವೆ. |
| ಉ) | ರಾಜ್ಯದ ಕೈಗಾರಿಕಾ ಪ್ರದೇಶಗಳಲ್ಲಿ ಶೋಷಿತ ವರ್ಗಗಳಿಗೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದ ಜನರಿಗೆ ನಿವೇಶನಗಳನ್ನು/ಶೆಡ್‌ಗಳನ್ನು ಹಂಚಿಕೆ ಮಾಡಲು ಜಾರಿಯಲ್ಲಿರುವ ಮಾರ್ಗಸೂಚಿಗಳೇನು ಮತ್ತು ಶೇಕಡವಾರು ಎಷ್ಟು ನಿವೇಶನಗಳನ್ನು ಹಂಚಲು ಅವಕಾಶವಿದೆ ಮತ್ತು ಹಿಂದುಳಿದ ಜನರಿಗೆ ನಿವೇಶನಗಳನ್ನು/ಶೆಡ್‌ಗಳನ್ನು ಎಷ್ಟು ದರದಲ್ಲಿ ಹಾಗೂ ಎಷ್ಟು ಶೇಕಡವಾರು ನಿವೇಶನಗಳನ್ನು ಕಳೆದ 03 ವರ್ಷಗಳಲ್ಲಿ ಹಂಚಿಕೆ ಮಾಡಲಾಗಿದೆ? | ದಿನಾಂಕ:21-03-2009 ರಂದು ನಡೆದ ಕೆ.ಐ.ಎ.ಡಿ.ಬಿ. ಮಂಡಳಿ ಸಭೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಮಂಡಳಿಯು ಇನ್ನು ಮುಂದೆ ಅಭಿವೃದ್ಧಿಪಡಿಸುವ ಹೊಸ ಕೈಗಾರಿಕಾ ಪ್ರದೇಶಗಳಲ್ಲಿ ಹಂಚಿಕೆ ಪ್ರದೇಶದ ಶೇ.22.65 ರಷ್ಟು ಜಮೀನನ್ನು ಮೀಸಲಿಟ್ಟು ಹಂಚಿಕೆ ಮಾಡಲು ತೀರ್ಮಾನಿಸಿರುತ್ತದೆ.<br><br>ಮುಂದುವರೆದು, ದಿನಾಂಕ:09-06-2022 ರಂದು ನಡೆದ ಕೆ.ಐ.ಎ.ಡಿ.ಬಿ ಮಂಡಳಿ ಸಭೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಮಂಡಳಿಯು ಇನ್ನು ಮುಂದೆ ಅಭಿವೃದ್ಧಿಪಡಿಸುವ ಹೊಸ ಕೈಗಾರಿಕಾ ಪ್ರದೇಶಗಳಲ್ಲಿ ಹಂಚಿಕೆ ಪ್ರದೇಶದ ಶೇ.24.10ರಷ್ಟು ಜಮೀನನ್ನು ಮೀಸಲಿಟ್ಟು ಹಂಚಿಕೆ ಮಾಡಲು ತೀರ್ಮಾನಿಸಿರುತ್ತದೆ.<br><br>ಸದರಿ ಮಂಡಳಿ ಸಭೆಗಳ ನಿರ್ಣಯದನ್ವಯ ಎಲ್ಲಾ ಹೊಸ ಕೈಗಾರಿಕಾ ಪ್ರದೇಶಗಳಲ್ಲಿ ಮೀಸಲಾತಿ ಇಟ್ಟು ನಿವೇಶನ ಹಂಚಿಕೆ ಮಾಡಲಾಗುತ್ತಿದೆ.<br><br>ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ಕೈಗಾರಿಕಾ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದಡಿ ಒಟ್ಟಾರೆ 582.47 ಎಕರೆ ಜಮೀನನ್ನು 757 ಉದ್ದಿಮೆದಾರರಿಗೆ ಆಯಾ ಕೈಗಾರಿಕಾ ಪ್ರದೇಶಗಳ ತಾತ್ಕಾಲಿಕ ಹಂಚಿಕೆ ದರದ ಮೇಲೆ ಶೇ.75 ರಷ್ಟು ರಿಯಾಯಿತಿ ನೀಡಿ ಜಮೀನು ಹಂಚಿಕೆ ಮಾಡಿರುತ್ತದೆ. |

**ಸಂಖ್ಯೆ: ಸಿಐ 34 ಐಎಪಿ 2026**

**(ಎಂ.ಬಿ. ಪಾಟೀಲ)**

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು